## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಚಂದ್ರಶೇಖರ್ ಕೆಂಭಾವಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಭಾಲ್ಕಿ, ಮತ್ತಿತರರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸುವ ಕುರಿತು.

**ಓದಲಾಗಿದೆ:**
1. ಮಾನ್ಯ ಉಪಲೋಕಾಯುಕ್ತರು, ಇವರು ಕರ್ನಾಟಕ ಲೋಕಾಯಕ್ತ ಕಾಯ್ದೆ 1984ರ ಕಲಂ 12(3) ರಡಿ ಸಲ್ಲಿಸಿರುವ ವರದಿಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ/241/2010/ಎಆರ್‌ಇ-5, ದಿನಾಂಕ:20.09.2016
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ/241/2010/ಎಆರ್‌ಇ-5, ದಿನಾಂಕ: 22.09.2016.

****

**ಪ್ರಸ್ತಾವನೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ಮೇಲೆ ಓದಲಾದ(2)ರಲ್ಲಿ ಓದಲಾದ ಪತ್ರದೊಂದಿಗೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12(3) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರವರು ಮೇಲೆ(1) ರಲ್ಲಿ ಓದಲಾದಂತೆ ನೀಡಿರುವ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ, ಸದರಿ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ತಿಳಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಭಾಲ್ಕಿ ತಾಲ್ಲೂಕು ಪಂಚಾಯತ್ ವ್ಯಾಪ್ತಿಯ ಸಿದ್ದೇಶ್ವರ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ 2010-11 ನೇ ಸಾಲಿನ ಅವಧಿಯಲ್ಲಿ 2 ಕ್ರಿಯಾ ಯೋಜನೆಗಳಿಗೆ ಗ್ರಾಮ ಸಭೆ ಕರೆಯದೆ ತಯಾರಿಸಿರುತ್ತಾರೆಂದು, ಮತ್ತು ಸಿದ್ದೇಶ್ವರ ಗ್ರಾಮದಿಂದ ಹಲಬರ್ಗಾ ಬೋಗಿ ಗ್ರಾಮಕ್ಕೆ ಕೂಡುವ ರಸ್ತೆ ಕಾಮಗಾರಿಗೆ 60 ಲಕ್ಷಕ್ಕಿಂತ ಹೆಚ್ಚು ಖರ್ಚು ಮಾಡಲಾಗಿದ್ದು, ಸದರಿ ರಸ್ತೆಯು ಈಗಾಗಲೇ ಕೆಟ್ಟುಹೋಗಿರುತ್ತದೆ ಎಂದು ಆರೋಪಿಸಿ, ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಸಿದ್ದೇಶ್ವರ ಗ್ರಾಮದ ನಿವಾಸಿಯಾದ ಶ್ರೀಸಂಗಮೇಶ ಶರಣಪ್ಪ ಗೌಡ, ಇವರು ನೀಡಿದ್ದ ದೂರಿನ ಬಗ್ಗೆ ತನಿಖೆಗೆ ಒಳಪಡಿಸಿ ಡಿ.ವೈ.ಎಸ್.ಪಿ. ಕರ್ನಾಟಕ ಲೋಕಾಯುಕ್ತ, ಬೀದರ ರವರಿಂದ ವರದಿಯನ್ನು ಪಡೆಯಲಾಗಿರುತ್ತೆಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ತಿಳಿಸಲಾಗಿರುತ್ತದೆ. ಅದರಂತೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 9 ರನ್ವಯ ತನಿಖೆ ಕೈಗೆತ್ತಿಕೊಳ್ಳಲಾಗಿರುತ್ತದೆಂದು ತಿಳಿಸಲಾಗಿರುತ್ತದೆ.

| ಕ್ರ.ಸಂ | ಅಧಿಕಾರಿಯ ಹೆಸರು ಮತ್ತು ಪದನಾಮ | ಎದುರುದಾರರ ಸಂಖ್ಯೆ |
|---|---|---|
| 1. | ಶ್ರೀ ಚಂದ್ರಶೇಖರ್ ಕೆಂಭಾವಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಭಾಲ್ಕಿ, ಬೀದರ ಜಿಲ್ಲೆ. | 1 |
| 2. | ಶ್ರೀ ಅನೀಲ್‌ಕುಮಾರ್ ಕುಂಟೂರ, ಪಂಚಾಯತ ಅಭಿವೃದ್ಧಿ ಅಧಿಕಾರಿ, ಸಿದ್ದೇಶ್ವರ ಗ್ರಾಮ ಪಂಚಾಯತಿ | 2 |

ದೂರುದಾರರ ದೂರಿನ ಬಗ್ಗೆ ಲೋಕಾಯುಕ್ತ ಉಪಾಧೀಕ್ಷಕರು, ಬೀದರ ಇವರ ವರದಿಯನ್ನು ಕೇಳಲಾಗಿ, ಕಿರಿಯ ಅಭಿಯಂತರರು ಲೋಕೋಪಯೋಗಿ ಇಲಾಖೆ, ಮತ್ತು ಕಿರಿಯ ಅಭಿಯಂತರರು ಪಿಆರ್.ಇ ಉಪವಿಭಾಗ, ಒಳನಾಡು ಜಲಸಾರಿಗೆ ಇಲಾಖೆ ಹಾಗೂ ಕೃಷಿ ಅಧಿಕಾರಿ, ಇವರುಗಳಿಂದ ಪಡೆಯಲಾಗಿದ್ದ ವರದಿಯಲ್ಲಿ **ಈ ಕೆಳಕಂಡಂತೆ** ವರದಿಸಲಾಗಿರುತ್ತದೆಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ನಮೂದಿಸಲಾಗಿರುತ್ತದೆ.

1. Measurement recorded in the M.B and at work site are not tallying.
2. M.B. for excavation of open well in Sy.no.3 of Maroor Vllage has not been furnished.
3. In executin the work of formation of road from Sindhe land to Nanoore land at Chikalchonda Village, drain has not been constructed on both sides of said 200 meters road.
4. Murram has not been laid on the land from said 200 meter up to 1250 meters (Nanoore Village).
5. Fishpond has been constructed in an extent 20 x30 meter instead of ½ acre in Sy. no. 143 belonginig to chandrakantha.
6. Boulder check has been provided to a length of 0.19 meters in the land of Siddeshwar, Siddappa instead of 200 meters.
7. Boulder check has been provided to a length of 38.20 meters instead of 200 meters in the land of Siddeswara, Sathyavathi.

8. Boulder check has been provided to a length of 39.90 meters instead of 204 meters in the land of Thippanna.
9. Only 77 mango plants were seen in the land of shashidara Viswanath, but 270 plants have been mentioned in the estimate.
10. In the estimate for provideng trenching and revetment in Sy. no.3 the length is shown to a length of 235 meters. But trenching and revetment is provided to a length of 135 meters only.

ಕಿರಿಯ ಅಭಿಯಂತರರು ಲೋಕೋಪಯೋಗಿ ಇಲಾಖೆ, ಕಿರಿಯ ಅಭಿಯಂತರರು ಪಿಆರ್.ಇ ಉಪವಿಭಾಗ, ಒಳನಾಡು ಜಲಸಾರಿಗೆ ಇಲಾಖೆ ಹಾಗೂ ಕೃಷಿ ಅಧಿಕಾರಿ, ಇವರುಗಳ ವರದಿಯನ್ವಯ, ಅಳತೆ ಪುಸ್ತಕದಲ್ಲಿ ನಮೂದಿಸಲಾದ ರಸ್ತೆ ಕಾಮಗಾರಿಗೆ ಅನುಗುಣವಾಗಿ ಕಡಿಮೆ ಕಾಮಗಾರಿ ನಡೆದಿರುವುದು ಮತ್ತು ಅಂದಾಜು ಪುಸ್ತಕದಲ್ಲಿ ನಮೂದಿಸಲಾದ ಕಾಮಗಾರಿಗೂ ಕಾರ್ಯರೂಪಕ್ಕೆ ತಂದ ಕಾಮಗಾರಿಗೂ ತಾಳೆಯಾಗದೇ ಇರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ ಎಂದು ವರದಿಸಿರುತ್ತಾರೆ.

ಎದುರುದಾರರು-1 ಮತ್ತು 2 ರವರು ನೀಡಿರುವ ಉತ್ತರವು ಅವರ ವಿರುದ್ಧದ ಆರೋಪಗಳನ್ನು ಕೈಬಿಡಲು ಸಮಂಜಸ/ತೃಪ್ತಿಕರವಾಗಿಲ್ಲದೆ ಇರುವುದರಿಂದ ಹಾಗೂ ಸಂಬಂಧಪಟ್ಟ ದಾಖಲಾತಿ ಮತ್ತು ಸಂಗತಿಗಳನ್ನು ಪರಿಶೀಲಿಸಲಾಗಿ, ಇಬ್ಬರು ಎದುರುದಾರರುಗಳು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವೆಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿಗಳು 1966ರ ನಿಯಮ 3(i)(ii) (iii)ರನ್ನು ಉಲ್ಲಂಘಿಸಿರುವುದರಿಂದ, ಸದರಿ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ವಹಿಸಿಕೊಡುವಂತೆ ಮಾನ್ಯ ಉಪಲೋಕಾಯುಕ್ತರು ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ ಮಾಡಿರುವ ಶಿಫಾರಸ್ಸನ್ನು ಕಳುಹಿಸಿಕೊಡುತ್ತಾ, ಅಂತೆಯೇ ಕ್ರಮವಹಿಸುವಂತೆ ಅಪರ ನಿಬಂಧಕರು, ರವರು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಶಿಫಾರಸ್ಸು ಅದರೊಂದಿಗಿನ ದಾಖಲಾತಿಗಳನ್ನು **ಪರಿಶೀಲಿಸಲಾಗಿ,** ಎದುರುದಾರರು 1 ಮತ್ತು 2 ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಆದುದರಿಂದ. ಮಾನ್ಯ ಉಪ ಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆಯ 1984ರ ಕಲಂ 12(3) ರನ್ವಯ. ಮಾಡಿರುವ ಶಿಫಾರಸ್ಸಿನಂತೆ, ಶ್ರೀ ಚಂದ್ರಶೇಖರ್ ಕೆಂಭಾವಿ. ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಭಾಲ್ಕಿ, ಬೀದರ ಜಿಲ್ಲೆ. ಹಾಗೂ ಶ್ರೀ ಅನೀಲ್‌ಕುಮಾರ್ ಕುಂಟೂರ. ಪಂಚಾಯತ ಅಭಿವೃದ್ಧಿ ಅಧಿಕಾರಿ, ಸಿದ್ದೇಶ್ವರ ಗ್ರಾಮ ಪಂಚಾಯತಿ ಇವರುಗಳ ವಿರುದ್ಧದ ಆರೋಪಗಳ ಸಂಬಂಧ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ ಜರುಗಿಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ 14(ಎ) ರನ್ವಯ ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 215 ವಿಸೇಬಿ 2016 ಬೆಂಗಳೂರು ದಿನಾಂಕ:21-11-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಶ್ರೀ ಚಂದ್ರಶೇಖರ್ ಕೆಂಭಾವಿ. ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಭಾಲ್ಕಿ, ಬೀದರ ಜಿಲ್ಲೆ ಹಾಗೂ ಶ್ರೀ ಅನೀಲ್‌ಕುಮಾರ್ ಕುಂಟೂರ, ಪಂಚಾಯತ ಅಭಿವೃದ್ಧಿ ಅಧಿಕಾರಿ, ಸಿದ್ದೇಶ್ವರ ಗ್ರಾಮ ಪಂಚಾಯತಿ ಇವರುಗಳ ವಿರುದ್ಧದ ಆರೋಪಗಳ ಸಂಬಂಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ ಸಮಗ್ರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ-14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

21/11/2016
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು

3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಬೀದರ
4) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-01.

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.